ಕರ್ನಾಟಕ ಸರ್ಕಾರ

# ಕರ್ನಾಟಕ ರಾಜ್ಯ ಮಹಿಳಾ ಆಯೋಗ

**ಡಾ|| ನಾಗಲಕ್ಷ್ಮೀ ಚೌಧರಿ, ಬಿ.ಡಿ.ಎಸ್, ಎಂ.ಡಿ.ಎಸ್**
**ಅಧ್ಯಕ್ಷರು**

ಸಂಖ್ಯೆ:ಕರಾಮಾ/ಅಆಶಾ/ /2025-26 11571 ದಿನಾಂಕ:31.10.2025

**ಗೆ,**
ಮುಖ್ಯಸ್ಥರು,
ಧರ್ಮಸ್ಥಳ ಪ್ರಕರಣಗಳಿಗೆ ಸಂಬಂಧಿಸಿದಂತೆ
ರಾಜ್ಯ ಸರ್ಕಾರ ರಚಿಸಿರುವ
ವಿಶೇಷ ತನಿಖಾ ತಂಡ,
ಕಾರ್ಲ್ಟನ್ ಭವನ, ಸಿ ಐ ಡಿ ಕಛೇರಿ,
ಬೆಂಗಳೂರು-560001.

**ಮಾನ್ಯರೇ,**

**ವಿಷಯ:** ದಕ್ಷಿಣ ಕನ್ನಡ ಜಿಲ್ಲೆ ಧರ್ಮಸ್ಥಳ ಪೊಲೀಸ್ ಠಾಣೆ ಮೊ. ಸಂ. 39/2025 ಕಲಂ 211(ಎ),ಬಿ.ಎನ್.ಎಸ್ ಅಡಿಯಲ್ಲಿ ದಾಖಲಾಗಿರುವ ಪ್ರಕರಣ ಹಾಗೂ ಇದರ ಸಂಬಂಧ ಇತರೆ ಪೊಲೀಸ್ ಠಾಣೆಗಳಲ್ಲಿ ದಾಖಲಾಗಬಹುದಾದ ಪ್ರಕರಣಗಳ ಸಮಗ್ರ ತನಿಖೆಗಾಗಿ ಸರ್ಕಾರವು ರಚಿಸಿರುವ ವಿಶೇಷ ತನಿಖಾ ತಂಡವು, ಧರ್ಮಸ್ಥಳದ ಸುತ್ತಮುತ್ತ ನಡೆದಿರುವ ಮಹಿಳೆಯರು ಮತ್ತು ಯುವತಿಯರ ಮೇಲಿನ ದೌರ್ಜನ್ಯ/ಕೊಲೆ ಪ್ರಕರಣಗಳನ್ನೂ ಸೇರಿದಂತೆ, ನಾಪತ್ತೆ, ಅಸಹಜ ಸಾವುಗಳ ಪ್ರಕರಣಗಳ ತನಿಖೆಯನ್ನು ಕೈಗೊಂಡಿರುವ ಬಗ್ಗೆ.

**ಉಲ್ಲೇಖ:**
1. ಸನ್ಮಾನ್ಯ ಮುಖ್ಯಮಂತ್ರಿಗಳು ಕರ್ನಾಟಕ ಸರ್ಕಾರ ಇವರಿಗೆ ಆಯೋಗದಿಂದ ಸಲ್ಲಿಸಿರುವ ಮನವಿಯ ದಿನಾಂಕ:14.07.2025
2. ಸರ್ಕಾರದ ಆದೇಶ ಸಂಖ್ಯೆ: ಎಚ್‌ಡಿ 142 ಸಿಓಡಿ 2025, ಬೆಂಗಳೂರು, ದಿನಾಂಕ : 19/07/2025

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ರಾಜ್ಯ ಮಹಿಳಾ ಆಯೋಗದಿಂದ, ಧರ್ಮಸ್ಥಳದಲ್ಲಿ ನೂರಾರು ಶವಗಳನ್ನು ಹೂತಿರುವುದಾಗಿ ವ್ಯಕ್ತಿಯೊಬ್ಬರು ನ್ಯಾಯಾಲಯದಲ್ಲಿ ಹೇಳಿಕೆಯನ್ನು ದಾಖಲಿಸಿದ ಬಗ್ಗೆ ಹಾಗೂ 12-07-2025ರಂದು ಟೈಮ್ಸ್ ನೌ ಮತ್ತಿತರ ಮಾಧ್ಯಮಗಳು ಮನುಷ್ಯರೊಬ್ಬರ ತಲೆಬುರುಡೆ ದೊರಕಿರುವ ಬಗ್ಗೆ ಹಾಗೂ ನಾಪತ್ತೆಯಾದ ವೈದ್ಯಕೀಯ ವಿದ್ಯಾರ್ಥಿನಿಯೊಬ್ಬರ ಕುಟುಂಬದ ಹೇಳಿಕೆಯ ವರದಿಯನ್ನು ಪ್ರಕಟಿಸಿದ ಬಗ್ಗೆ, ದಿನಾಂಕ 14.07.2025ರಂದು ಸನ್ಮಾನ್ಯ ಮುಖ್ಯಮಂತ್ರಿಗಳಿಗೆ ಬರೆದ ಪತ್ರದಲ್ಲಿ ಹೀಗೆ ಕೋರಲಾಗಿತ್ತು

"ಮಾಧ್ಯಮ ವರದಿ ಹಾಗೂ ಶವಗಳನ್ನು ಹೂತಿರುವ ವ್ಯಕ್ತಿಯ ಹೇಳಿಕೆಯಲ್ಲಿ, ಕಳೆದ 20ಕ್ಕೂ ಹೆಚ್ಚು ವರ್ಷ ಗಂಭೀರ ಸ್ವರೂಪದ ದೌರ್ಜನ್ಯ, ಹತ್ಯೆ, ಅತ್ಯಾಚಾರ, ಅಸ್ವಾಭಾವಿಕವಾದ ಸಾವು ಮತ್ತು ನಾಪತ್ತೆ ಪ್ರಕರಣಗಳು ಹಲವು ಮಹಿಳೆಯರ ಮತ್ತು ವಿದ್ಯಾರ್ಥಿನಿಯರ ಮೇಲೆ ನಡೆದಿರುವ ಬಗ್ಗೆ ತಿಳಿಸಲಾಗಿದೆ. ..........................ಹಾಗಾಗಿ ಧರ್ಮಸ್ಥಳದ ವ್ಯಾಪ್ತಿಯಲ್ಲಿ ಕಳೆದ 20 ವರ್ಷಗಳಿಂದ ನಾಪತ್ತೆಯಾಗಿರುವ, ಮಹಿಳೆಯರ ಮತ್ತು ವಿದ್ಯಾರ್ಥಿನಿಯರ ಪ್ರಕರಣಗಳು, ಅಸ್ವಾಭಾವಿಕವಾದ ಸಾವು/ಕೊಲೆ ಪ್ರಕರಣಗಳು, ಮತ್ತು ಅತ್ಯಾಚಾರ ಪ್ರಕರಣಗಳಿಗೆ ಸಂಬಂಧಿಸಿದಂತೆ, ಸಮಗ್ರ ಮತ್ತು ನಿಷ್ಪಕ್ಷಪಾತ ತನಿಖೆಗಾಗಿ ಹಿರಿಯ ಪೊಲೀಸ್ ಅಧಿಕಾರಿಗಳ ನೇತೃತ್ವದಲ್ಲಿ ವಿಶೇಷ ತನಿಖಾ ತಂಡ (ಎಸ್‌ಐಟಿ) ರಚಿಸಬೇಕಾಗಿ ಮನವಿ" .

➢ 2

ನಂ. 107, 1ನೇ ಮಹಡಿ, ಕರ್ನಾಟಕ ಗೃಹ ಮಂಡಳಿ ಕಟ್ಟಡ, ಕಾವೇರಿ ಭವನ, ಕೆ.ಜಿ. ರಸ್ತೆ,
ಬೆಂಗಳೂರು – 560 009. ದೂರವಾಣಿ : ಕಛೇರಿ : 080–22216485 / 86,
ವೆಬ್ ಸೈಟ್ : www.kscw.karnataka.gov.in ಇ–ಮೇಲ್ : kscwbang123@gmail.com

ಈ ಉಲ್ಲೇಖವು ತೋರಿಸುತ್ತಿರುವಂತೆ, ಆಯೋಗವು ಎಸ್‌ಐಟಿಯನ್ನು ರಚಿಸುವಂತೆ ಸರ್ಕಾರವನ್ನು ಕೋರಿದ್ದು, ಮಹಿಳೆಯರಿಗೆ ಸಂಬಂಧಿಸಿದ ಪ್ರಕರಣಗಳ ತನಿಖೆಯು ಸಮಗ್ರವಾಗಿ ನಡೆಯಬೇಕೆಂಬ ಆಶಯದಿಂದ ಆಯೋಗದ ವತಿಯಿಂದ ಬರೆದ ಪತ್ರಕ್ಕೆ ಸ್ಪಂದಿಸಿದ ಸನ್ಮಾನ್ಯ ಮುಖ್ಯಮಂತ್ರಿಗಳು ಮತ್ತು ರಾಜ್ಯ ಸರ್ಕಾರವು ಕೂಡಲೇ ಕಾರ್ಯಪ್ರವೃತ್ತವಾಗಿ, ತಮ್ಮ ನೇತೃತ್ವದಲ್ಲಿ ಇನ್ನಿತರ ಹಿರಿಯ ಪೊಲೀಸ್ ಅಧಿಕಾರಿಗಳನ್ನು ನಿಯಮಿಸುತ್ತಾ, ವಿಶೇಷ ತನಿಖಾ ತಂಡ (Special Investigation Team)ವನ್ನು ರಚಿಸಿರುತ್ತಾರೆ. ಎಸ್‌ಐಟಿ ರಚನೆ ಕುರಿತ ಸರ್ಕಾರದ ಆದೇಶದಲ್ಲಿ "ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ದಕ್ಷಿಣ ಕನ್ನಡ ಜಿಲ್ಲೆಯ ಧರ್ಮಸ್ಥಳ ಪೊಲೀಸ್ ಠಾಣೆಯಲ್ಲಿ ದಾಖಲಾಗಿರುವ ಕ್ರಿಮಿನಲ್ ಮೊಕದ್ದಮೆ ಸಂಖ್ಯೆ:39/2025, ಕಲಂ 211 (ಎ), ಬಿಎನ್‌ಎಸ್ ಪ್ರಕರಣದ ಸಮಗ್ರ ತನಿಖೆಯನ್ನು ಕೈಗೊಳ್ಳಲು ಕೆಳಕಂಡ ಅಧಿಕಾರಿಗಳನ್ನೊಳಗೊಂಡ ವಿಶೇಷ ತನಿಖಾ ತಂಡ (Special Investigation Team)ವನ್ನು ರಚಿಸಿ ಸರ್ಕಾರ ಆದೇಶಿಸಿದೆ……" ."………..ಮೇಲ್ಕಂಡ ಪ್ರಕರಣವೂ ಸೇರಿದಂತೆ ಹಾಗೂ ಇದರ ಸಂಬಂಧ ಕರ್ನಾಟಕ ರಾಜ್ಯದ ಇತರೆ ಪೊಲೀಸ್ ಠಾಣೆಗಳಲ್ಲಿ ದಾಖಲಾಗಿರುವ/ದಾಖಲಾಗುವ ಇತರೆ ಎಲ್ಲಾ ಕ್ರಿಮಿನಲ್ ಪ್ರಕರಣಗಳ ತನಿಖೆಯನ್ನು ಡಿಜಿ ಮತ್ತು ಐಜಿಪಿರವರು ವಿಶೇಷ ತನಿಖಾ ತಂಡ (Special Investigation Team)ಕ್ಕೆ ವರ್ಗಾಯಿಸುವುದು ಹಾಗೂ ವಿಶೇಷ ತನಿಖಾ ತಂಡಕ್ಕೆ ಅಗತ್ಯವಿರುವ ಇತರೆ ಅಧಿಕಾರಿ/ಸಿಬ್ಬಂದಿಗಳನ್ನು ಒದಗಿಸುವುದು" ಎಂದು ಆದೇಶಿಸಲಾಗಿದೆ.

ಹೀಗೆ ಎಸ್‌ಐಟಿ ರಚನೆಯಾಗಬೇಕೆಂಬ ಕೋರಿಕೆಯ ಆಶಯವೂ ಮತ್ತು ಸರ್ಕಾರದ ಆದೇಶವೂ ಕೇವಲ ಕ್ರಿಮಿನಲ್ ಮೊಕದ್ದಮೆ ಸಂಖ್ಯೆ:39/2025, ಕಲಂ 211 (ಎ), ಬಿಎನ್‌ಎಸ್ ಪ್ರಕರಣದ ತನಿಖೆಗೆ ಸೀಮಿತವಾಗಿರದೆ, ಮಹಿಳೆಯರಿಗೆ ಸಂಬಂಧಿಸಿದ ಪ್ರಕರಣಗಳ 'ಸಮಗ್ರ' ತನಿಖೆಯನ್ನು ಎಸ್‌ಐಟಿ ಮಾಡಬೇಕೆಂಬುದನ್ನು ಸೂಚಿಸುತ್ತದೆ. ಹೀಗಿದ್ದರೂ, ಈವರೆಗೆ ಎಸ್‌ಐಟಿ ಅಂತಹ ಪ್ರಕರಣಗಳನ್ನು ತನಿಖೆ ಮಾಡುತ್ತಿರುವ ಬಗ್ಗೆ ಯಾವುದೇ ಮಾಹಿತಿ ಕಂಡು ಬರುತ್ತಿಲ್ಲ.

ಮಾಧ್ಯಮಗಳ ವರದಿಯನ್ನು ಗಮನಿಸಿದಾಗ ಎಸ್‌ಐಟಿ ರಚನೆಯಾದಾಗಿನಿಂದ ಕೇವಲ ನ್ಯಾಯಾಲಯದ ಮುಂದೆ ಹೇಳಿಕೆ ನೀಡಿದ 'ಚಿನ್ನಯ್ಯ' ಎಂಬ ವ್ಯಕ್ತಿಯ ಹೇಳಿಕೆಯನ್ನು ಆಧರಿಸಿ ಮಾನವ ಕಳೇಬರಹಗಳ ಉತ್ಖನನಕ್ಕೆ ಸೀಮಿತವಾಗಿ ಆತನ ಹೇಳಿಕೆಯ ಮಿತಿಯೊಳಗೆ ತನಿಖೆ ನಡೆದಿರುವುದು ಕಂಡುಬಂದಿದೆ. ಉತ್ಖನನದ ಸಂದರ್ಭದಲ್ಲಿ ದೊರೆತ ಅಸ್ಥಿಪಂಜರಗಳ ಅವಶೇಷಗಳ ಬಗ್ಗೆ, ಸಾವು ಸಂಭವಿಸಿದ ಕಾರಣದ ಬಗ್ಗೆ, ಅವುಗಳಲ್ಲಿ ಮಹಿಳೆಯರ ಅಸ್ಥಿಪಂಜರಗಳನ್ನು ಗುರುತಿಸುವ ಬಗ್ಗೆ, ಕಾಡಿನ ಪ್ರದೇಶದಲ್ಲಿ ಅಸ್ಥಿಪಂಜರ ದೊರೆಯಲು ಕಾರಣಗಳ ಬಗ್ಗೆ ಮಾಹಿತಿ ಪತ್ತೆ ಹಚ್ಚುವ ಜೊತೆಗೆ, ಎಸ್‌ಐಟಿ ರಚನೆಯ, ಆಯೋಗದ ಕೋರಿಕೆ ಮತ್ತು ನಂತರದ ಸರ್ಕಾರದ ಆದೇಶಕ್ಕೆ ಅನುಗುಣವಾಗಿ ಎಸ್‌ಐಟಿಯು ಕೂಡಲೇ ಮಹಿಳೆಯರು ಮತ್ತು ಯುವತಿಯರ ನಾಪತ್ತೆ, ಅವರ ಅತ್ಯಾಚಾರ, ಕೊಲೆ ಪ್ರಕರಣಗಳನ್ನೂ ಸೇರಿದಂತೆ ಅಸಹಜ ಮತ್ತು ಅನುಮಾನಾಸ್ಪದ ಸಾವುಗಳು ಮತ್ತಿತರ ಪ್ರಕರಣಗಳ ಸಮಗ್ರ ತನಿಖೆಯನ್ನು ಕೈಗೊಳ್ಳುವಂತೆ ಅಥವಾ ಕೈಗೊಂಡಿದ್ದರೆ ಈ ಬಗ್ಗೆ ಮಾಹಿತಿಯನ್ನು ಆಯೋಗಕ್ಕೆ ನೀಡುವಂತೆ ಕೋರಲಾಗಿದೆ.

ವಂದನೆಗಳೊಂದಿಗೆ,

ತಮ್ಮ ವಿಶ್ವಾಸಿ,

Nagalakshmi

(ಡಾ. ನಾಗಲಕ್ಷ್ಮೀ ಚೌಧರಿ)